# ಕರ್ನಾಟಕ ಸರ್ಕಾರ

**ಆಯುಕ್ತರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ: ಜಿ.ಪಿ.ಟಿ.ಆರ್-2022/WA No: 305/2023/ಶೀ.ಅ-2023-24 ದಿನಾಂಕ: 01/11/2023

ಇವರಿಗೆ,

ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,
ಇನ್‌ಫೆಂಟ್ರಿ ರಸ್ತೆ,
ಬೆಂಗಳೂರು-01.

ಮಾನ್ಯರೆ,

ವಿಷಯ: ಪದವೀಧರ ಪ್ರಾಥಮಿಕ ಶಿಕ್ಷಕ ವೃಂದದ (6 ರಿಂದ 8ನೇ ತರಗತಿ) ನೇಮಕಾತಿಗೆ ಸಂಬಂಧಿಸಿದಂತೆ ಕಲ್ಯಾಣ ಕರ್ನಾಟಕ ಜಿಲ್ಲೆಗಳು ಮತ್ತು ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆಗಳ ಕೌನ್ಸಿಲಿಂಗ್ ಪ್ರಕ್ರಿಯೆಯ ಪ್ರಕಟಣೆಯನ್ನು ಹೊರಡಿಸುವ ಬಗ್ಗೆ.

===

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪದವೀಧರ ಪ್ರಾಥಮಿಕ ಶಿಕ್ಷಕ ವೃಂದದ (6 ರಿಂದ 8ನೇ ತರಗತಿ) ನೇಮಕಾತಿಗೆ ಸಂಬಂಧಿಸಿದಂತೆ ಕಲ್ಯಾಣ ಕರ್ನಾಟಕ ಜಿಲ್ಲೆಗಳು ಮತ್ತು ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆಗಳ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ದಿನಾಂಕ: 04/11/2023 ರಿಂದ ಹಮ್ಮಿಕೊಳ್ಳಲಾಗಿದೆ. ಈ ಕುರಿತು ಪತ್ರಿಕಾ ಪ್ರಕಟಣೆಯನ್ನು ಈ ಪತ್ರದೊಂದಿಗೆ ಲಗತ್ತಿಸಿದ್ದು, ಇದನ್ನು ದಿನಾಂಕ:02-11-2023 ರಂದು ದಿನ ಪತ್ರಿಕೆಗಳಲ್ಲಿ ರಾಜ್ಯ ಆವೃತ್ತಿಯಲ್ಲಿ ಹಾಗೂ ಎಲೆಕ್ಟ್ರಾನಿಕ್ ಮಾಧ್ಯಮಗಳಲ್ಲಿ ಸುದ್ದಿಯಾಗಿ ಉಚಿತವಾಗಿ ಪ್ರಕಟಿಸಲು ಕ್ರಮವಹಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಶಾಲಾ ಶಿಕ್ಷಣ ಇಲಾಖೆ

ಕರ್ನಾಟಕ ಸರ್ಕಾರ

# ಶಾಲಾ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕೆ.ಜಿ ರಸ್ತೆ, ಬೆಂಗಳೂರು-560009.

ಸಂಖ್ಯೆ:-GPTR-2022/WA NO:305/2023.ಶೀ.ಅ-2023-24. ದಿನಾಂಕ: 01/11/2023.

## 2022ರ ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8 ನೇ ತರಗತಿ) ನೇಮಕಾತಿಗೆ ಸಂಬಂಧಪಟ್ಟಂತೆ ಬಾಕಿ ಇದ್ದ ಕಲ್ಯಾಣ ಕರ್ನಾಟಕ ಜಿಲ್ಲೆಗಳು ಮತ್ತು ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ ಕೌನ್ಸಿಲಿಂಗ್ ಪ್ರಕ್ರಿಯೆಯ ಪ್ರಕಟಣೆ

"ಪದವೀಧರ ಪ್ರಾಥಮಿಕ ಶಿಕ್ಷಕ (6 ರಿಂದ 8ನೇ ತರಗತಿ) ನೇಮಕಾತಿ-2022" ಕ್ಕೆ ಸಂಬಂಧಿಸಿದಂತೆ ಕಲ್ಯಾಣ ಕರ್ನಾಟಕ ಜಿಲ್ಲೆಗಳು ಮತ್ತು ಬೆಂಗಳೂರು ಉತ್ತರ ಹಾಗೂ ದಕ್ಷಿಣ ಜಿಲ್ಲೆಗಳ 371ಜೆ ಹುದ್ದೆಗಳ ಬಗ್ಗೆ ಮಾನ್ಯ ನ್ಯಾಯಾಲಯಗಳಲ್ಲಿ ಪ್ರಕರಣಗಳಿದ್ದ ಕಾರಣದಿಂದ ತಡೆ ಹಿಡಿಯಲಾಗಿದ್ದ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂ.23162/2023, 23450/2023 ರಲ್ಲಿನ ದಿನಾಂಕ: 30/10/2023ರ ಆದೇಶ ಮತ್ತು ಇಡೀ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಈಗಾಗಲೇ ರಿಟ್ ಅಪೀಲು ಸಂಖ್ಯೆ: **305/2023** ರಲ್ಲಿನ ದಿನಾಂಕ: 12/10/2023ರ ಆದೇಶದ ತೀರ್ಪಿನ ಹಿನ್ನೆಲೆಯಲ್ಲಿ ನ್ಯಾಯಾಲಯಗಳ ಆದೇಶದಿಂದ ಪ್ರಭಾವಿತವಾಗಬಹುದಾದ ಹುದ್ದೆಗಳನ್ನು ಕಾಯ್ದಿರಿಸಿ ಉಳಿದ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್‌ನ್ನು ಮುಂದುವರೆಸಲಾಗಿದೆ.

ಈ ಬಗ್ಗೆ ಸದರಿ 371 ಜೆ ಹುದ್ದೆಗಳಿರುವ (ಶೇಕಡ 80 ರ ಸ್ಥಳೀಯ ವೃಂದ , ಶೇಕಡ 20ರ ಮಿಕ್ಕುಳಿದ ವೃಂದ ಮತ್ತು ಶೇಕಡ 8ರ ರಾಜ್ಯ ಮಟ್ಟದ ಸ್ಥಳೀಯ ವೃಂದದ ಹುದ್ದೆಗಳು) 09 ಜಿಲ್ಲೆಗಳಾದ ಬೀದರ್, ಕಲಬುರ್ಗಿ, ರಾಯಚೂರು, ಕೊಪ್ಪಳ, ಯಾದಗಿರಿ, ಬಳ್ಳಾರಿ, ವಿಜಯನಗರ, ಬೆಂಗಳೂರು ಉತ್ತರ ಮತ್ತು ದಕ್ಷಿಣ ಜಿಲ್ಲೆಗಳ ಕುರಿತಾಗಿ ದಿನಾಂಕ: 08/03/2023 ರಂದು ಪ್ರಕಟಿತ 1:1 ಮುಖ್ಯ ಆಯ್ಕೆ ಪಟ್ಟಿಯಲ್ಲಿನ ಕೌನ್ಸಿಲಿಂಗ್‌ಗೆ ಅರ್ಹ ಅಭ್ಯರ್ಥಿಗಳ ವಿವರಗಳನ್ನು ದಿನಾಂಕ: 02/11/2023 ರಂದು ಶಾಲಾ ಶಿಕ್ಷಣ ಇಲಾಖೆಯ ವೆಬ್ ಸೈಟ್ https://schooleducation.karnataka.gov.in ನಲ್ಲಿ ಪ್ರಕಟಿಸಲಾಗುವುದು.

ಸದರಿ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಕ್ರಮವಾಗಿ ಗಣಿತ ಮತ್ತು ವಿಜ್ಞಾನ,, ಸಮಾಜ ವಿಜ್ಞಾನ, ಜೀವ ವಿಜ್ಞಾನ ಮತ್ತು ಆಂಗ್ಲಭಾಷಾ ಹುದ್ದೆಗಳಿಗೆ ಸ್ಥಳ ನಿಯುಕ್ತಿ ಕೌನ್ಸಿಲಿಂಗ್‌ನ್ನು ದಿನಾಂಕ: 04/11/2023 ರಿಂದ ಬೆಳಿಗ್ಗೆ 10.30 ಗಂಟೆಯಿಂದ ಆಯಾ ಜಿಲ್ಲಾ ನೇಮಕಾತಿ ಪ್ರಾಧಿಕಾರಿಯವರಾದ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರ ಕಛೇರಿಯಲ್ಲಿ ನಡೆಸಲಾಗುವುದು. ಅದ್ದರಿಂದ ಅಭ್ಯರ್ಥಿಗಳು ಇಲಾಖಾ ವೆಬ್ ಸೈಟ್‌ನಲ್ಲಿರುವಂತೆ ಎಲ್ಲಾ ಅಗತ್ಯ ವಿವರಗಳನ್ನು ಪಡೆದುಕೊಂಡು ಸಕಾಲದಲ್ಲಿ ಕೌನ್ಸಿಲಿಂಗ್ ಸ್ಥಳದಲ್ಲಿ ಭಾವ ಚಿತ್ರವಿರುವ ಗುರುತಿನ ಚೀಟಿ ಮತ್ತು ನೇಮಕಾತಿಗೆ ಸಂಬಂಧಪಟ್ಟಂತೆ ಅಗತ್ಯ ದಾಖಲೆಗಳೊಂದಿಗೆ ಕಡ್ಡಾಯವಾಗಿ ಹಾಜರಾಗುವುದು.

ಹೆಚ್ಚಿನ ವಿವರಗಳಿಗೆ ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆಯ ಕಛೇರಿಯನ್ನು ಸಂಪರ್ಕಿಸುವುದು.

ಸಹಿ/-

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ